# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿನ ಎಲ್ಲಾ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯ ಸೌಲಭ್ಯವನ್ನು ಪಡೆಯಲು ಫಲಾನುಭವಿಗಳ ಗರಿಷ್ಠ ವಯೋಮಿತಿಯನ್ನು ರದ್ದುಗೊಳಿಸುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 474 ಬಿಎಂಎಸ್ 2022, ಬೆಂಗಳೂರು, ದಿನಾಂಕ:05-09-2022.
2. ಮಾನ್ಯ ಇಲಾಖಾ ಸಚಿವರ ಟಿಪ್ಪಣಿ ಸಂಖ್ಯೆ: ಸಕ. ಹಿವಕ/ಸ/ 6657/2022-23, ದಿನಾಂಕ:12.09.2022.

*********

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿನ ಎಲ್ಲಾ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯ ಸೌಲಭ್ಯವನ್ನು ಪಡೆಯಲು ಫಲಾನುಭವಿಗಳ ವಯೋಮಿತಿಯನ್ನು ಗರಿಷ್ಠ 60 ವರ್ಷಕ್ಕೆ ಆದೇಶ ಹೊರಡಿಸಿದ ದಿನಾಂಕದಿಂದ ಅನ್ವಯವಾಗುವಂತೆ ನಿಗಧಿಪಡಿಸಿ ಆದೇಶಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಮಾನ್ಯ ಇಲಾಖಾ ಸಚಿವರ ಟಿಪ್ಪಣಿಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿನ ಎಲ್ಲಾ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯ ಸೌಲಭ್ಯವನ್ನು ಪಡೆಯಲು ಫಲಾನುಭವಿಗಳ ಗರಿಷ್ಟ ವಯೋಮಿತಿಯನ್ನು 60 ವರ್ಷಕ್ಕೆ ಸೀಮಿತಗೊಳಿಸಿರುವುದನ್ನು ತೆಗೆದು ಹಾಕುವ ಕುರಿತು ಹಾಗೂ ಜಂಟಿ ಖಾತೆಯಲ್ಲಿರುವ ಅರ್ಹ ಅರ್ಜಿದಾರನ್ನು ಪರಿಗಣಿಸಲು ಕೂಡಲೇ ಕ್ರಮವಹಿಸುವಂತೆ ಸೂಚಿಸಿದ್ದು, ಸದರಿ ಪ್ರಸ್ತಾವನೆಯನ್ನು ಮಾನ್ಯ ಮುಖ್ಯಮಂತ್ರಿಯವರು ಅನುಮೋದಿಸಿರುತ್ತಾರೆ.

ಮೇಲೆ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 638 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ:29-10-2022.**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿನ ಎಲ್ಲಾ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯ ಸೌಲಭ್ಯವನ್ನು ಪಡೆಯಲು ಫಲಾನುಭವಿಗಳ ಗರಿಷ್ಟ ವಯೋಮಿತಿಯನ್ನು 60 ವರ್ಷಕ್ಕೆ ಸೀಮಿತಗೊಳಿಸಿರುವ ಆದೇಶ ಸಂಖ್ಯೆ: ಹಿಂವಕ 474 ಬಿಎಂಎಸ್ 2022, ದಿನಾಂಕ: 05-09-2022ನ್ನು ರದ್ದುಗೊಳಿಸಿದೆ ಹಾಗೂ ಜಂಟಿ ಖಾತೆಯಲ್ಲಿರುವ ಅರ್ಹ ಅರ್ಜಿದಾರರನ್ನು ಪರಿಗಣಿಸಲು ಆದೇಶಿಸಿದೆ.

...2

ಈ ಆದೇಶವನ್ನು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ನಾಗವೇಣಿ ಎಸ್.ಕೆ.)**
ಸರ್ಕಾರದ ಉಪ ಕಾರ್ಯದರ್ಶಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವೀರಶೈವ ಲಿಂಗಾಯಿತ ಅಭಿವೃದ್ಧಿ ನಿಗಮ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
12. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ, ಬೆಂಗಳೂರು.
13. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ, ಬೆಂಗಳೂರು.

ಪ್ರತಿ ಮಾಹಿತಿಗಾಗಿ :-

1. ಮಾನ್ಯ ಮುಖ್ಯ ಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಸಚಿವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ ವಿಕಾಸ ಸೌಧ ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ (ಸಮನ್ವಯ ಶಾಖೆ)- ಇಲಾಖಾ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲು ಅಗತ್ಯ ಕ್ರಮಕ್ಕಾಗಿ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.